400 ರೂಪಾಯಿಗಳನ್ನು ತಡೆಹಿಡಿದರೆ ಬಹಳ ತೊಂದರೆಯಾಗುತ್ತದೆ. ಆದ್ದರಿಂದ ದಯಮಾಡಿ ಈ ಸುತ್ತೋಲೆಯನ್ನು ಮಾರ್ಪಾಡು ಮಾಡಬೇಕು. ಮುಂದೆ ಯಾರ್ಯಾರಿಗೆ ಇದನ್ನು ಕೊಡಬೇಕು, ಯಾರ್ಯಾರು ಅಧಿಕಾರಿಗಳು ಇದರಲ್ಲಿ ಶಾಮೀಲಾಗಿದ್ದಾರೆ, ತಪ್ಪು ಮಾಡಿದ್ದಾರೆ, ಅವರ ಮೇಲೆ ಕ್ರಮ ತೆಗೆದುಕೊಳ್ಳಲು ನಮ್ಮದೇನೂ ವಿರೋಧವಿಲ್ಲ. ಅದಕ್ಕೆ ನಾವೂ ಸಂಪೂರ್ಣವಾಗಿ ಸಹಕಾರ ಮಾಡುತ್ತೇವೆ. ನಿಜವಾದ ಫಲಾನುಭವಿಗಳಿಗೆ, ಬಡವರಿಗೆ ಅನ್ಯಾಯ ಮಾಡುವುದು ಒಳ್ಳೆಯದಲ್ಲ. ಇದರ ಮೂಲ ಉದ್ದೇಶ fail ಆಗುತ್ತದೆ. ದಯಮಾಡಿ ಈ ಸುತ್ತೋಲೆಯನ್ನು ವಾಪಸ್ ತೆಗೆದುಕೊಳ್ಳಬೇಕೆಂದು ತಮ್ಮ ಮೂಲಕ ಸರ್ಕಾರದಲ್ಲಿ ಒತ್ತಾಯ ಮಾಡುತ್ತೇನೆ.

ಶ್ರೀ ಎಸ್. ಸುರೇಶ್ ಕುಮಾರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು): ಮಾನ್ಯ ಅಧ್ಯಕ್ಷರೆ, ದಿನಾಂಕ 11.02.2011ರ ಒಂದು ಸುತ್ತೋಲೆಯ ಬಗ್ಗೆ ಮಾನ್ಯ ಕೃಷ್ಣಪ್ಪನವರು ಪ್ರಸ್ತಾಪ ಮಾಡಿ ಸಂಧ್ಯಾ ಸುರಕ್ಷ, ವೃದ್ಧಾಪ್ಯ ವೇತನ, ನಿರ್ಗತಿಕ ವೇತನ, ಅಂಗವಿಕಲರ ವೇತನದ ಮಂಜೂರಾತಿಯನ್ನು ನಿಲ್ಲಿಸಿಬಿಟ್ಟಿದ್ದಾರೆಂದು ಸರ್ಕಾರದ ಗಮನಸೆಳೆದಿದ್ದಾರೆ. ನಾನು ಮಾನ್ಯ ಮುಖ್ಯಮಂತ್ರಿಯವರ ಗಮನಕ್ಕೆ ಈ ವಿಚಾರವನ್ನು ತಂದು ಆ ಸುತ್ತೋಲೆಯನ್ನು ವಾಪಸ್ ತೆಗೆದುಕೊಳ್ಳುವಲ್ಲಿ ಕ್ರಮ ತೆಗೆದುಕೊಳ್ಳುತ್ತೇನೆ.

(ii) ವಿಷಯ: ಶಾಸಕರ ಹಕ್ಕನ್ನು ಮೊಟಕುಗೊಳಿಸಿರುವ ಬಗ್ಗೆ.

ಶೀ ಎನ್. ಸುನಿಲ್ ಹೆಗಡೆ (ಹಳಿಯಾಳ): ಮಾನ್ಯ ಅಧ್ಯಕ್ಷರೆ, ಮೊನ್ನೆ ನನ್ನ ಕ್ಷೇತ್ರದ ಗೋಲಿಹಳ್ಳಿಯಲ್ಲಿ ಬಂದಾರಿನ ಶಂಕು ಸ್ಥಾಪನೆಗೆ ನೀರಾವರಿ ಇಲಾಖೆಯವರು ಉದ್ಘಾಟಕರಾಗಿ ನನ್ನನ್ನು ಕರೆದಿದ್ದರು. ಅತಿಥಿಯಾಗಿ ಸ್ಥಳೀಯ ಎಂಎಲ್‌ಸಿ ಯವರನ್ನು ಕರೆದಿದ್ದರು. ನಾನು ಇನ್ನು ಆ ಸ್ಥಳಕ್ಕೆ ಮುಟ್ಟುವ ಮೊದಲೇ ಅಲ್ಲಿಯ ಎಇಇ ಆದ ಎಂ.ಹೆಚ್. ಖಾನಾಪುರ್‌ರವರು, ಕಿರಿಯ ಇಂಜಿನಿಯರ್ ಆದ ರುದ್ರಮೂರ್ತಿ ತಳವಾರ್‌ರವರು ಮತ್ತು ಗುತ್ತಿಗೆದಾರ ಆಶೋಕ್ ಗೋಟನೇಕರ್‌ರವರು ಸೇರಿ ನನ್ನ ಹಕ್ಕನ್ನು ಮೊಟಕುಗೊಳಿಸಿ, ನಾನು ಅಲ್ಲಿಗೆ ಹೋಗುವ ಮೊದಲೇ ಉದ್ಘಾಟನಾ ಕಾರ್ಯಕ್ರಮವನ್ನು ಮಾಡಿ ನನ್ನ ಹಕ್ಕನ್ನು ಮೊಟಕುಗೊಳಿಸಿದ್ದಾರೆ. ಕೂಡಲೇ

ಇದನ್ನು ಹಕ್ಕುಚ್ಯುತಿ ನಿರ್ಣಯವಾಗಿ ಪರಿಗಣಿಸಿ ಅವರ ಮೇಲೆ ಕ್ರಮ ತೆಗೆದುಕೊಳ್ಳಬೇಕೆಂದು ವಿನಂತಿ ಮಾಡುತ್ತಿದ್ದೇನೆ.

ಅಧ್ಯಕ್ಷರು: ರಾಜ್ಯದಲ್ಲಿ ವಿಧಾನಸಭಾ ಸದಸ್ಯರ ಕುರಿತು ಶಿಷ್ಟಾಚಾರ ಉಲ್ಲಂಘನೆಯಾಗಿರುವ ಬಗ್ಗೆ ದಿನಾಂಕ 16.03.2011ರ ಬುಧವಾರದಂದು ಮಾನ್ಯ ಮುಖ್ಯಮಂತ್ರಿಯವರು,ಮಾನ್ಯ ಸಭಾಪತಿಯವರು, ವಿಧಾನಪರಿಷತ್ತು, ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಹಾಗೂ ವಿರೋಧ ಪಕ್ಷದ ನಾಯಕರು ಸೇರಿದಂತೆ ಸಭೆಯನ್ನು ಕರೆದಿರುತ್ತೇನೆ. ಅದರಲ್ಲಿ ಇನ್ನು ಮುಂದೆ ಇಂಥ ಘಟನೆಗಳು ನಡೆಯದಂತೆ ಒಂದು ತೀರ್ಮಾನವನ್ನು ತೆಗೆದುಕೊಳ್ಳಲಾಗುವುದು.

ಈಗ ಮಾನ್ಯ ಸುನಿಲ್ ಹೆಗಡೆಯವರು ಏನು ವಿಚಾರವನ್ನು ಪ್ರಸ್ತಾಪ ಮಾಡಿದ್ದಾರೆ, ಅದರ ಬಗ್ಗೆ ಸರ್ಕಾರದ ಮುಖ್ಯಕಾರ್ಯದರ್ಶಿಯವರಿಗೆ ಪತ್ರವನ್ನು ಬರೆದು ವರದಿಯನ್ನು ತರಿಸಿ ಮುಂದಿನ ಕ್ರಮ ಕೈಗೊಳ್ಳುತ್ತೇನೆ.

ಶ್ರೀ ಬಂಡೆಪ್ಪ ಖಾಶೆಂಪುರ್: ಅಧಿಕಾರಿಗಳಿಗೆ ಚುರುಕು ಮುಟ್ಟಿಸುವ ಸಲುವಾಗ ಆ ಅಧಿಕಾರಿಗಳನ್ನು ತಕ್ಷಣ ಸಸ್ಪೆಂಡ್ ಮಾಡಲು ಆದೇಶ ಮಾಡಿ.

(iii) ವಿಷಯ: ಪಶ್ಚಿಮ ವಾಹಿನಿ ಯೋಜನೆ ಬಗ್ಗೆ.

ಶ್ರೀ ಯು.ಟಿ. ಖಾದರ್ (ಮಂಗಳೂರು): ಮಾನ್ಯ ಅಧ್ಯಕ್ಷರೆ, ಕಳೆದ ಹಲವಾರು ವರ್ಷಗಳಿಂದ ನೇತ್ರಾವತಿ ನದಿ ತಿರುವಿನ ಬಗ್ಗೆ ಇವತ್ತು ನಮ್ಮ ಜಿಲ್ಲೆಯ ಜನಸಾಮಾನ್ಯರು ವಿರೋಧವನ್ನು ವ್ಯಕ್ತ ಪಡಿಸಿದ್ದರು. ವಿಶ್ವ ತುಳು ಸಮ್ಮೇಳನದಲ್ಲಿ ಸರ್ಕಾರದ ಸಚಿವರು ಬಂದು ಆ ಯೋಜನೆಯನ್ನು ಕೈಗೊಳ್ಳುವುದಿಲ್ಲವೆಂದು ಒಂದು ಮಾತನ್ನು ಕೊಟ್ಟಿದ್ದಾರೆ. ಆದರೆ ಮೊನ್ನೆ ದಿಢೀರನೆ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಒಂದು ಸ್ಟೇಟ್‌ಮೆಂಟ್ ಕೊಟ್ಟಿದ್ದಾರೆ. ಅದರಿಂದ ಅಲ್ಲಿಯ ಜನರು ಕಂಗಾಲಾಗಿದ್ದಾರೆ ಮತ್ತು ಪ್ರತಿಭಟನೆ ಮಾಡಲು ಸಜ್ಜಾಗುತ್ತಿದ್ದಾರೆ. ನೇತ್ರಾವತಿ ನದಿ ತೀರದಲ್ಲಿ ವಾಸಿಸುವ ಜನಸಾಮಾನ್ಯರ ಪರಿಸ್ಥಿತಿಯನ್ನು ಅರಿತುಕೊಳ್ಳದೆಯೇ, ಅವರಿಗೆ ಬೇಕಾದ ನೀರಿನ ವ್ಯವಸ್ಥೆ ಮಾಡದೆಯೇ, ಅಂತರ್ಜಲ ಅಭಿವೃದ್ಧಿಯ ಬಗ್ಗೆ ಸಮೀಕ್ಷೆ ನಡೆಸದೆಯೇ ನೇತ್ರಾವತಿ ತಿರುವು